ಊ)ತಾಲ್ಲೂಕಿನಲ್ಲಿ ಒಟ್ಟು 45 ಕಿರಿಯ ಮಹಿಳಾ ಆರೋಗ್ಯ ಸಹಾಯಕಿ ಹುದ್ದೆಗಳು ಮಂಜೂರಾಗಿದ್ದು ಅವುಗಳಲ್ಲಿ 37 ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. 8 ಹುದ್ದೆಗಳು ಖಾಲಿ ಇರುತ್ತವೆ.

ರಾಜ್ಯದಲ್ಲಿ 23 ಆರೋಗ್ಯ ಸಹಾಯಕಿಯರ ತರಬೇತಿ ಶಾಲೆ ಇದ್ದು ಇದರಲ್ಲಿ ಪ್ರತಿ ವರ್ಷ 720 ಅಭ್ಯರ್ಥಿಗಳು 18 ತಿಂಗಳ ತರಬೇತಿಯನ್ನು ಪಡೆಯುತ್ತಾರೆ. ಸದ್ಯಕ್ಕೆ ತರಬೇತಿ ಪಡೆದ ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರು ಯಾರು ಇರುವುದಿಲ್ಲ. ತರಬೇತಿ ಪಡೆದು ಉತ್ತೀರ್ಣರಾಗಿ ಬಂದಂತಹವರಿಗೆ ನೇಮಕಾತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಋ) ತಾಲ್ಲೂಕಿನಲ್ಲಿ ಒಟ್ಟು 45 ಉಪಕೇಂದ್ರಗಳಿದ್ದು 31 ಕಟ್ಟಡಗಳಿರುತ್ತವೆ. ಈ ಕಟ್ಟಡಗಳಲ್ಲಿ ಸಣ್ಣಪುಟ್ಟ ದುರಸ್ತಿಗಳನ್ನು ಜಿಲ್ಲಾ ಪಂಚಾಯತ್ ಅಡಿಯಲ್ಲಿ ಒದಗಿಸಿರುವ ಅನುದಾನದಲ್ಲಿ ಕೈಗೊಳ್ಳಲಾಗುತ್ತದೆ. ಈಗ ಎನ್.ಆರ್.ಹೆಚ್.ಎಂ. ಅಡಿಯಲ್ಲಿ ಒದಗಿಸಿರುವ ಮುಕ್ತ ನಧಿ ಅಡಿಯಲ್ಲಿ ಹಾಗೂ ಈ ವರ್ಷ ಜಾರಿಯಾಗಲಿರುವ ಕೆ.ಎಚ್.ಎಸ್.ಆರ್. ಡಿ.ಪಿ.ಯೋಜನೆಯಲ್ಲಿಯೂ ದುರಸ್ತಿಗಳಿಗೆ ಅವಕಾಶ ಕಲ್ಪಿಸಲಾಗಿತ್ತದೆ.

ಸೊಮಣ್ಣ.ವಿ (ಬಿನ್ನಿ ಪೇಟೆ) 188(394)

ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ

ಅ)ರಾಜ್ಯದ ಯಾವ ಯಾವ ಖಾಸಗೀ ವೈದ್ಯಕೀಯ ಕಾಲೇಜುಗಳಿಗೆ ಇಲ್ಲಿಯವರೆಗೆ ಡೀಮ್ಡ ಯೂನಿವರ್ಸಿಟಿ ಸ್ಥಾನಮಾನವನ್ನು ನೀಡಲಾಗಿದೆ?

ಆ) ರಾಜ್ಯ ಸರಕಾರವು ಜೆ.ಎಸ್.ಎಸ್. ವೈದ್ಯಕೀಯ ಮಹಾ ವಿದ್ಯಾಲಯಕ್ಕೆ ಡೀಮ್ಡ್ ಯೂನಿವರ್ಸಿಟಿ ಸ್ಥಾನಮಾನ ನೀಡಲು ಶಿಫಾರಸ್ಸು ಮಾಡಿ ಕೇಂದ್ರಕ್ಕೆ ಕಳುಹಿಸಿದೆಯೇ?

ಇ) ಕಳುಹಿಸಿದ್ದಲ್ಲಿ, ಮೇಲ್ಕಂಡ ವೈದ್ಯಕೀಯ ಕಾಲೇಜಿಗೆ ಈ ಸ್ಥಾನಮಾನ ದೊರಕಿಸಿ ಕೊಡಲು ಸರಕಾರ ಕೈಗೊಂಡ ಕ್ರಮಗಳೇನು?

ಶ್ರೀ ವಿ.ಎಸ್.ಆಚಾರ್ಯ

ಅ). 1.ಕಸ್ತೂರ ಬಾ ವೈದ್ಯಕೀಯ ಕಾಲೇಜು, ಮಂಗಳೂರು

2. ಕಸ್ತೂರ ಬಾ ವೈದ್ಯಕೀಯ ಕಾಲೇಜು, ಮಣಿಪಾಲ್

3. ಜೆ.ಎನ್. ವೈದ್ಯಕೀಯ ಕಾಲೇಜು, ಬೆಳಗಾಂ

4. ಶ್ರೀ ದೇವರಾಜ್ ಅರಸ್ ವೈದ್ಯಕೀಯ ಕಾಲೇಜು, ಕೋಲಾರ

ಆ)ಇಲ್ಲ

ಇ) ಉದ್ಭವಿಸುವುದಿಲ್ಲ

189(363) ಶ್ರೀ ವಾಟಾಳ್ ನಾಗರಾಜ್(ಚಾಮರಾಜನಗರ)

ಮಾನ್ಯ ಆರೋಗ್ಯ ಮತ್ತು ಕುಟುಂಬ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ

ಅ)ಬೆಂಗಳೂರು ನಗರವು ಸೇರಿದಂತೆ ನಾಯಿಗಳ ಕಡಿತದಿಂದ ಇಲ್ಲಿಯವರೆಗೆ ಸತ್ತವರ ಸಂಖ್ಯೆ ಎಷ್ಟು?

ಆ)ನಾಯಿಗಳ ಕಡಿತವನ್ನು ತಪ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಇ)ನಾಯಿ,ವಿಷಪೂರಿತ ಹಾವು ಮತ್ತು ಕುದುರೆ ಇವುಗಳ ಕಡಿತಕ್ಕೆ ಒಳಗಾದರೆ ತಕ್ಷಣ ಔಷಧಿಯನ್ನು ಒದಗಿಸಲು ಕೈಗೊಂಡ ಕ್ರಮವೇನು?